1889ನೇ ಇಸವಿ ಅರ್ಜಿ ನಂಬರ್ 172.

ಮೃತಪಟ್ಟ ಬುಕ್ಕಾ ವೇಸ್ತ್ರಿಯವರ ಆಸ್ತಿ ವಿಷಯದಲ್ಲಿ—

ಅರ್ಜಿದಾರು, 1ನೇ ತಿರುಮಲಗಿರಿ, 2ನೇ ರಂಗಯ್ಯ, 3ನೇ ರಾಮ ಮೈನರ್ ಗಾರ್ಡಿಯರ್ ಇವರಗಳ ಚಿಕ್ಕಪ್ಪ ಹುಚ್ಚಣ್ಣನವರು ಮೃತಪಟ್ಟ ಸದರೀ ಬುಕ್ಕಾ ವೇಸ್ತ್ರಿರಿಗೆ ಮೈನರ್ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಚನ್ನರಾಯಪಟ್ಟಣದ ತಾಲ್ಲೂಕ ಹಿರೀಸಾವೆ ಸ್ಥಳದ ಸದರೀ ಹುಚ್ಚಣ್ಣನವರು ಸದರೀ ವಾಸಸ್ಥರಾಗಿ ಮೃತಪಟ್ಟ ಬುಕ್ಕಾವೇಸ್ತ್ರಿಯವರ ಜಿಂದಗಿ ಬಗ್ಯಾಗಿ ಬರತಕ್ಕ 950 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಹುಚ್ಚಣ್ಣನವರ ಅರ್ಜಿಯನ್ನು 1889ನೇ ಇಸವಿ ಆಗಸ್ಟ್ ತಿಂಗಳು ತಾರೀಖು 21ರಲ್ಲಿ ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಬುಕ್ಕಾವೇಸ್ತ್ರಿಯವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಅರ್ಜೀ ನಂಬರ್ 173.

ಮೃತಪಟ್ಟ ಸೈಬುಮಿಯಾ ಸಾಹೆಬರ ಆಸ್ತೀ ವಿಷಯದಲ್ಲಿ—

ಅರ್ಜಿದಾರ 1ನೇ ಸಗೇಸೈಬೀಬಿ, 2ನೇ ಮಸೆವಮಯಾಸಾಬಿ ಸಹ ಮೃತಪಟ್ಟ ಸದರೀ ಸೈಬುಮಿಯಾಸಾಬಿಗೆ ಹೆಂಡತಿ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ದೇವರಾಜಪೊಲಾ ಸ್ಥಳದ ಸದರೀ ಸಗೆಸೈಬೀಬಿ ಮಸೆವಮಯ ಸಹ ಸದರೀ ವಾಸಸ್ಥರಾಗಿ ಮೃತಪಟ್ಟ ಸೈಬುಮಿಯಾಸಾಹೆಬರ ಜಿಂದಗಿ ಬಗ್ಯಾಗಿ ಬರತಕ್ಕ 300 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ 1—2ನೇ ಅರ್ಜೀದಾರ್ರು ಅರ್ಜಿಯನ್ನು 1889ನೇ ಇಸವಿ ಆಗಸ್ಟ್ ತಿಂಗಳು ತಾರೀಖು 21ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸೈಬುಮಿಯಾಸಾಹೆಬರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಅರ್ಜಿ ನಂಬರ್ 176.

ಮೃತಪಟ್ಟ ಬೆಳಗೋಡು ಸುಬ್ಬರಾಯಶೆಟ್ಟರ ಆಸ್ತಿ ವಿಷಯದಲ್ಲಿ—

ಅರ್ಜಿದಾರು, 1ನೇ ರಂಗಶೆಟ್ಟಿ, 2ನೇ ಚಿಕ್ಕರಂಗಶೆಟ್ಟಿ, 3ನೇ ಮಂಜಯ್ಯ, 4ನೇ ವೆಂಕಟರಂಗಯ್ಯ, 5ನೇ ಕಾಮಯ್ಯ 2—3—4—5ನೇ ಮೈನರ್ ಗಾರ್ಡಿಯರ್ 1ನೇ ರಂಗಶೆಟ್ಟಿ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಅರಕಲಗೂಡು ತಾಲ್ಲೂಕು ಕೊಣನೂರು ಕಸಬಾ ಸ್ಥಳದ ಸದರೀ ರಂಗಶೆಟ್ಟರು ಸದರೀ ವಾಸಸ್ಥರಾಗಿ ಮೃತಪಟ್ಟ ಸುಬ್ಬರಾಯಶೆಟ್ಟರ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರಂಗಶೆಟ್ಟರ ಅರ್ಜಿಯನ್ನು 1889ನೇ ಇಸವಿ ಆಗಸ್ಟ್ ತಿಂಗಳು ತಾರೀಖು 28ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬರಾಯಶೆಟ್ಟರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಅರ್ಜೀ ನಂಬರ್ 180.

ಮೃತಪಟ್ಟ ಯಡತೊರೆ ಸುಬ್ಬಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜಿದಾರು, 1ನೇ ವೆಂಕಟನಾರಣಪ್ಪ, 2ನೇ ವೆಂಕಟಸುಬ್ಬಯ್ಯ, 3ನೇ ನಾಗಪ್ಪ, 4ನೇ ವೆಂಕಟರಮಣಯ್ಯ, 5ನೇ ಸುಬ್ಬರಾಯ, 6ನೇ ನಾರಣಪ್ಪ ಮೈನರ್ ಮೃತಪಟ್ಟ ಸದರೀ ಸುಬ್ಬಯ್ಯನವರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ತಿರುಮಕೂಡ್ಲು ನರಶೀಪುರದ ತಾಲ್ಲೂಕು ಗರ್ಗೇಶ್ವರಿ ಸ್ಥಳದ ಸದರೀ ಅರ್ಜಿದಾರನು ಸದರೀ ವಾಸಸ್ಥರಾಗಿ ಮೃತಪಟ್ಟ ಸುಬ್ಬಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ 1—2—3—4—5ನೇ ಅರ್ಜಿದಾರ್ರು ಅರ್ಜಿಯನ್ನು 1889ನೇ ಇಸವಿ ಆಗಸ್ಟ್ ತಿಂಗಳು ತಾರೀಖು 28ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಜುಲೈ ತಿಂಗಳು 27ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜೆರಾವ್,
ಡಿಸ್ಟ್ರಿಕ್ಟ್ ಜಡ್ಜ್.